ಆ) ಹೌದು

ಇ) ಈ ಕುರಿತಂತೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ

1576 (1719) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) – ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯಲ್ಲಿ ತಾಂತ್ರಿಕ ಕಾಲೇಜುಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ,

ಆ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಡಿ ಹೆಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಚಾಮರಾಜನಗರ ಜಿಲ್ಲೆಯಲ್ಲಿ ಹೊಸ ಇಂಜಿನಿಯರಿಂಗ್ ಕಾಲೇಜನ್ನು ಸ್ಥಾಪಿಸಲು ಉದ್ದೇಶಿಸಿರುವುದಿಲ್ಲ ಆದರೆ ಚಾಮರಾಜನಗರದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್‌ನ್ನು ಇಂಜಿನಿಯರಿಂಗ್ ಕಾಲೇಜನ್ನಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ

ಆ) ಅಗತ್ಯ ಮೂಲಭೂತ ಸೌಕರ್ಯಗಳಾದ ನಿವೇಶನ, ಕಟ್ಟಡ ಇತ್ಯಾದಿಗಳ ಲಭ್ಯತೆ ಮೇರೆಗೆ ಎ ಐ ಸಿ ಟಿ ಇ ಯ ಅನುಮೋದನೆ ಪಡೆದ ನಂತರ ಈ ಬಗ್ಗೆ ಕ್ರಮ ವಹಿಸಲಾಗುವುದು

1577 (1720) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) – ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಡಿ ಹೆಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಚಾಮರಾಜನಗರ ಜಿಲ್ಲೆಯ ಈ ಕೆಳಕಂಡ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳಿರುತ್ತವೆ

ಕಾಲೇಜಿನ ಹೆಸರು	ಕೋರ್ಸ್	ಕಾಂಬಿನೇಷನ್
ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಾಮರಾಜನಗರ	ಬಿ ಎಸ್ಸಿ	ಪಿಎಂಇ
ಮಹದೇಶ್ವರ ಕಾಲೇಜು ಕೊಳ್ಳೇಗಾಲ	ಬಿ ಎಸ್ಸಿ	ಸಿಬಿಝಡ್, ಪಿಎಂಸಿಎಸ್
ಜೆಎಸ್ಎಸ್ ಮಹಿಳಾ ಕಾಲೇಜು, ಚಾಮರಾಜನಗರ	ಬಿ ಎಸ್ಸಿ	ಪಿಎಂಸಿಎಸ್ ಪಿಸಿಎಂ

ಆ) ಉದ್ಭವಿಸುವುದಿಲ್ಲ

1578 (2089) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) – ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು , (ಜಿಲ್ಲಾವಾರು ವಿವರಗಳನ್ನು ಒದಗಿಸುವುದು),

ಆ) ಕಳೆದ 3 ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಹೊಸದಾಗಿ ಎಷ್ಟು ಗ್ರಂಥಾಲಯಗಳನ್ನು ಸ್ಥಾಪಿಸಲಾಗಿದೆ ಹಾಗೂ ಇವುಗಳಿಗೆ ವೆಚ್ಚ ಮಾಡಲಾಗಿರುವ ಹಣವೆಷ್ಟು,

ಇ) ಇದೇ ಅವಧಿಯಲ್ಲಿ ಪುಸ್ತಕ ಖರೀದಿಗಾಗಿ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಹಾಗೂ ಪುಸ್ತಕ ಖರೀದಿ ಮಾಡುವಾಗ ಅನುಸರಿಸುವ ನೀತಿ ನಿಯಮಗಳೇನು,

ಈ) ಇದೇ ಅವಧಿಯಲ್ಲಿ ಎಷ್ಟು ಪ್ರಸ್ತಾವನೆಗಳು ಸರ್ಕಾರದ ಮುಂದಿವೆ,

ಉ) ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ ಎಷ್ಟು ಗ್ರಂಥಾಲಯಗಳನ್ನು ತೆರೆಯಲಾಗುವುದು,

ಊ) ಈ ಪೈಕಿ ಬೀದರ್ ಜಿಲ್ಲೆಯಲ್ಲಿ ತೆರೆಯಲಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು)

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿರುವ ಒಟ್ಟು ಗ್ರಂಥಾಲಯಗಳ ಸಂಖ್ಯೆ – 3979 ಜಿಲ್ಲಾವಾರು ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ